# ಪ್ರಭು ಚೌಹಾಣ್‌ಗೆ ಕೋವಿಡ್ ಸೋಂಕು

ಸಂ.ಕ, ಸಮಾಚಾರ ಬೆಂಗಳೂರು 11/9/20

ಪಶುಸಂಗೋಪನೆ ಮತ್ತು ವಕ್ಫ್ ಸಚಿವ ಪ್ರಭು ಚೌವ್ಹಾಣ್ ಅವರಿಗೆ ಕೋವಿಡ್-19 ಕೊರೊನಾ ಸೋಂಕು ಧೃಡಪಟ್ಟಿದೆ. ವೈದ್ಯರ ಸಲಹೆಯಂತೆ ಬೀದರ್‌ನಲ್ಲಿ ಹೋಮ್ ಕ್ವಾರಂಟೈನ್‌ನಲ್ಲಿದ್ದು ಚಿಕಿತ್ಸೆ ಪಡೆಯುತ್ತಿದ್ದು, ಸಧ್ಯ ಆರೋಗ್ಯ ಸ್ಥಿರವಾಗಿದೆ. ಎರಡು ದಿನಗಳ ಹಿಂದೆಯಷ್ಟೆ



ಸಚಿವರ ವಾಹನ ಚಾಲಕನಿಗೆ ಸೋಂಕು ಧೃಢಪಟ್ಟ ಹಿನ್ನೆಲೆಯಲ್ಲಿ ಸಚಿವ ಪ್ರಭು ಚವ್ಹಾಣ್ ಟೆಸ್ಟ್ ಮಾಡಿಸಿದ್ದು ವರದಿಯಲ್ಲಿ ಪಾಸಿಟಿವ್ ಬಂದಿದೆ ಎಂದು ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಅವರ ಆಪ್ತ ಸಹಾಯಕ ಹಾಗೂ ಬೀದರ್‌ನಲ್ಲಿ ಸಚಿವರ ಗನ್ ಮ್ಯಾನ್ ಅವರಿಗೂ ಸೋಂಕು ಧೃಡ ಪಟ್ಟಿದೆ. ಇತ್ತೀಚೆಗೆ ನನ್ನ ಸಂಪರ್ಕಕ್ಕೆ ಬಂದವರು ಟೆಸ್ಟ್ ಮಾಡಿಸಿಕೊಳ್ಳಿ ಎಂದು ಸಚಿವರು ವಿನಂತಿಸಿದ್ದಾರೆ. ಜೊತೆಗೆ ನನ್ನ ಅಣ್ಣನ ಮಗ ದಿಲೀಪ್ ಚವ್ಹಾಣ್ ಕೂಡ ಸೋಂಕು ಧೃಢಪಟ್ಟಿದೆ ಎಂದು ಫೇಸ್‌ಬುಕ್‌ನಲ್ಲಿ ಬರೆದುಕೊಂಡಿದ್ದಾರೆ. ಇನ್ನೊಂದೆಡೆ ರಾಯಚೂರು ಜಿಲ್ಲೆ ಸಿಂಧನೂರು ಶಾಸಕ ವೆಂಕಟರಾವ್ ನಾಡಗೌಡ ಅವರಿಗೂ ಕೊರೊನಾ ಸೋಂಕು ತಗುಲಿದ್ದು ಹೋಂ ಕ್ವಾರೆಂಟೈನ್ ಆಗಿದ್ದಾರೆ.